



ಅರುಣ ಪಿ. ಭಟ್ಟ

## ವಾರಭವಿಷ್ಯ: 08.08.2024ರಿಂದ 14.08.2024ರವರೆಗೆ




ವಾರದ ಶುರುವಿನಲ್ಲಿ ಕೌಟುಂಬಿಕ ಸಂಗತಿಗಳಲ್ಲಿ ಹಿನ್ನಡೆ ಕಾಣುವಂತಾಗುತ್ತದೆ. ಅಧಿಕಾರಿಗಳಿಂದ ಮೆಚ್ಚುಗೆ ಸಿಗಲಿದೆ. ಹಲವು ಸವಾಲುಗಳು ಏಕಕಾಲಕ್ಕೆ ಎದುರಾಗುತ್ತವೆ. ಪ್ರಯಾಣ ಹೆಚ್ಚಾಗಲಿದೆ. ಅಧಿಕ ಹಣ ಕೂಡ ಖರ್ಚಾಗಲಿದೆ. ವ್ಯಾಪಾರ ಉದ್ಯಮ ವಿಸ್ತರಣೆಗೆ ಹೆಚ್ಚಿನ ಅವಕಾಶಗಳು ದೊರೆಯಲಿವೆ. ಹಣಕಾಸಿನ ವೆಚ್ಚ ಹೆಚ್ಚಾಗಲಿದೆ. ಶುಭದಿನ 08. ದೇವ್ಯಪರಾದ ಕ್ಷಮಾಪನಾ ಸ್ತೋತ್ರ ಪಠಿಸಿರಿ.




ವಾರದ ಆರಂಭದಲ್ಲಿ ಗೃಹಾಲಂಕಾರದ ಕಡೆಗೆ ನಿಮ್ಮ ಗಮನ ಹೆಚ್ಚಿರುತ್ತದೆ. ದಿಢೀರನೆ ಅನ್ಯರ ಜೊತೆ ಜಗಳ ಎದುರಾಗಬಹುದು ಎಚ್ಚರ ಅಗತ್ಯ. ವಾರದ ಅಂತ್ಯಕ್ಕೆ ಸರಿಯುತ್ತಾ ಶೈಕ್ಷಣಿಕ ಸಂಗತಿಗಳಿಗೆ ಹೆಚ್ಚಿನ ಮಹತ್ವ ನೀಡುತ್ತೀರಿ. ಆದಾಯ ಹೆಚ್ಚಳ ಮಾಡಿಕೊಳ್ಳುವುದಕ್ಕೆ ಹೊಸ ಯೋಜನೆಯನ್ನು ಸಿದ್ಧಪಡಿಸುತ್ತೀರಿ. ಸಂಬಂಧ ಹುಡುಕುವ ನಿಮ್ಮ ಪ್ರಯತ್ನಕ್ಕೆ ಯಶಸ್ಸು ಸಿಗಲಿದೆ. ಶುಭದಿನ 11. ಆಂಜನೇಯ ಸ್ತೋತ್ರ ಪಠಿಸಿರಿ.




ಕೌಟುಂಬಿಕ ವಿಚಾರಗಳಿಗೆ ಹೆಚ್ಚು ಪ್ರಾಶಸ್ತ್ಯ ನೀಡಲಿದ್ದೀರಿ. ವಾರದ ಮಧ್ಯ ಭಾಗದಲ್ಲಿ ನಿಮ್ಮ ಪ್ರತಿಭೆ ಮತ್ತು ಶ್ರಮಕ್ಕೆ ಮನ್ನಣೆ ಸಿಗಲಿದೆ. ನಿಮ್ಮ ಕ್ರಿಯಾತ್ಮಕ ಆಲೋಚನೆಯನ್ನು ಗರಿಷ್ಠ ಮಟ್ಟಕ್ಕೆ ಬಳಸುವ ಅವಕಾಶ ದೊರೆಯಲಿದೆ. ವೈಯಕ್ತಿಕ ಸಂಬಂಧದಲ್ಲಿ ಬಾಂಧವ್ಯ ಗಟ್ಟಿ ಆಗುವುದರಿಂದ ಹೆಚ್ಚು ಸಂತುಷ್ಟರಾಗಲಿದ್ದೀರಿ. ವಾರದ ಕೊನೆಗೆ ಧನ ಲಾಭದ ಅವಕಾಶವೂ ಸಿಗಲಿದೆ. ಶುಭದಿನ 12. ಶ್ರೀ ದಕ್ಷಿಣಾಮೂರ್ತಿ ಸ್ತೋತ್ರ ಪಠಿಸಿರಿ.




ವಾರದ ಶುರುವಿನಲ್ಲೇ ವ್ಯಾಪಾರ ಉದ್ಯಮದಲ್ಲಿ ಪ್ರಗತಿ ಕಾಣಿಸುತ್ತದೆ. ಉದ್ಯಮದ ವಿಸ್ತರಣೆಗೆ ಮುಖ್ಯವಾದ ತೀರ್ಮಾನ ಕೈಗೊಳ್ಳಲಿದ್ದೀರಿ. ಜೀವನ ಸಂತೋಷದಾಯಕವಾಗಿ ಇರುತ್ತದೆ. ವಾರದ ಮಧ್ಯಭಾಗದಲ್ಲಿ ಉದ್ಯೋಗ ನಿಮಿತ್ತ ದೂರದ ಪ್ರಯಾಣ  ಮಾಡಬೇಕಾಗುತ್ತದೆ. ಮುಖ್ಯವಾದ ಕೆಲಸ ಕಾರ್ಯ ಮುಂದೂಡಬೇಕಾದ ಸನ್ನಿವೇಶ ಎದುರಾಗುತ್ತದೆ. ಶುಭದಿನ 10. ಕಾಲಭೈರವನ ಸೇವೆ ಮಾಡಿರಿ.




ವಾರದ ಶುರುವಿನಲ್ಲಿ ಕುಟುಂಬದೊಂದಿಗೆ ಕೆಲ ಅಸಮಾಧಾನದ ಘಟನೆಗಳು ಸಂಭವಿಸಬಹುದು. ಆದರೂ ನಿಮ್ಮ ವ್ಯಾಪಾರವನ್ನು ವಿಸ್ತರಿಸಲು ಅತ್ಯುತ್ತಮ ಸಮಯ ಇದು. ಈ ಅವಧಿಯಲ್ಲಿ ತುಂಬ ಆಪ್ತರಾದ ಸಂಬಂಧಿಕರನ್ನು ಭೇಟಿ ಆಗಲಿದ್ದೀರಿ. ಅವರಿಗೆ ಅಗತ್ಯವಾದ ನೆರವನ್ನು ನೀಡಲು ಮುಂದಾಗಲಿದ್ದೀರಿ. ಕೌಟುಂಬಿಕವಾಗಿ ಕೆಲ ಜವಾಬ್ದಾರಿಗಳನ್ನು ನೀವು ವಹಿಸಿಕೊಳ್ಳಬೇಕಾಗುತ್ತದೆ. ಶುಭದಿನ 09. ಲಿಂಗಾಷ್ಟಕ ಪಠಿಸಿರಿ.




ಆದಾಯ ಮೂಲ ಹೆಚ್ಚಿಸಿಕೊಳ್ಳುವ ಕಡೆಗೆ ನಿಮ್ಮ ಗಮನ ಕೇಂದ್ರೀಕೃತವಾಗಿರುತ್ತದೆ. ಆದಾಯದಲ್ಲಿ ನಿರಂತರವಾಗಿ ಏರಿಕೆ ಕಾಣಿಸಿಕೊಳ್ಳುತ್ತದೆ. ಬರುವ ಆದಾಯದ ಮೂಲಕವೇ ಅಗತ್ಯ ಇರುವ ಕೆಲವು ಸಲಕರಣೆಗಳನ್ನು ಖರೀದಿಸುತ್ತೀರಿ. ಶೈಕ್ಷಣಿಕ ಕ್ಷೇತ್ರದಲ್ಲಿ ಉತ್ತಮವಾದ ಪ್ರಗತಿ ಇದೆ. ವಾರದ ಮಧ್ಯದಲ್ಲಿ ಸಮಸ್ಯೆಗಳು ಕಾಣಿಸಿಕೊಳ್ಳಬಹುದು. ಶುಭದಿನ 07. ಲಕ್ಷ್ಮೀನಾರಾಯಣ ಹೃದಯ ಪಾರಾಯಣ ಮಾಡಿರಿ.




ವಾರದ ಆರಂಭದಲ್ಲಿ ಉನ್ನತ ಶಿಕ್ಷಣಕ್ಕೆ ಯತ್ನಿಸುತ್ತಿರುವವರಿಗೆ ಯಶಸ್ಸು. ಈ ಅವಧಿಯಲ್ಲಿ ದೇವತಾರಾಧನೆಗೆ ಹೆಚ್ಚಿನ ಒತ್ತು ಕೊಡುವಿರಿ. ವಾರದ ಮಧ್ಯ ಭಾಗದಲ್ಲಿ ವೃತ್ತಿಪರ ಜೀವನದಲ್ಲಿ ಅತ್ಯುತ್ತಮವಾದ ಬೆಳವಣಿಗೆಗೆ ಅವಕಾಶ ಇದೆ. ಆದಾಯದ ಹೆಚ್ಚಳಕ್ಕೆ ಅನುಕೂಲ ಆಗುವ ಸಾಧ್ಯತೆಗಳು ಇದೆ. ಮಾನಸಿಕ ನೆಮ್ಮದಿಯನ್ನು ಮತ್ತಷ್ಟು ಹೆಚ್ಚಿಸಲಿದೆ. ಶುಭದಿನ 09. ಕನಕಧಾರಾ ಸ್ತೋತ್ರ ಪಠಣಮಾಡಿರಿ.




ಆಸ್ತಿ ಖರೀದಿಗೆ ಪ್ರಯತ್ನಿಸುತ್ತಿರುವವರು ಸಂಬಂಧಪಟ್ಟ ಕಾಗದಪತ್ರಗಳನ್ನು ಪರಿಶೀಲನೆ ನಡೆಸಲಿದ್ದೀರಿ. ದೊಡ್ಡ ತೊಂದರೆಯನ್ನು ತಡೆಯುವ ನಿಮ್ಮ ಯತ್ನಕ್ಕೆ ಪೂರಕ ಸನ್ನಿವೇಶಗಳು ನೆರವಿಗೆ ಬರಲಿವೆ. ವೈಯಕ್ತಿಕ ಸಂಬಂಧದಲ್ಲಿ ಕೆಲವು ಕಹಿ ಬೆಳವಣಿಗೆಗಳು ಆಗಲಿವೆ. ವಾರದ ಅಂತ್ಯಕ್ಕೆ ಸರಿಯುತ್ತಾ ಕುಟುಂಬದವರ ಬೆಂಬಲ ದೊರೆಯಲಿದೆ. ಅತ್ಯುತ್ತಮ ಪ್ರಗತಿ ಇದೆ. ಶುಭದಿನ 08. ಸೌಂದರ್ಯಲಹರಿ ಪಠಿಸಿರಿ.




ಉದ್ಯೋಗಸ್ಥರಿಗೆ ವಾರದ ಶುರುವಿನಲ್ಲಿ ಯಶಸ್ಸು ದೊರೆಯಲಿದೆ. ಈ ಹಿಂದೆ ನೀವು ಹಾಕಿದ ಶ್ರಮಕ್ಕೆ ಒಂದೊಂದಾಗಿ ಯಶಸ್ಸು ದೊರೆಯಲು ಆರಂಭವಾಗುತ್ತದೆ. ನಿಮ್ಮ ಖರ್ಚು ವೆಚ್ಚಗಳು ಅಧಿಕವಾಗಲಿವೆ. ವಾರದ ಅಂತ್ಯಕ್ಕೆ ಸರಿಯುತ್ತಾ ಆರೋಗ್ಯದಲ್ಲಿ ಸಮಸ್ಯೆಗಳು ಎದುರಾಗಬಹುದು. ತಾಳ್ಮೆಯಿಂದ ನಿಮ್ಮ ಸಮಸ್ಯೆಗಳನ್ನು ಎದುರಿಸಲಿದ್ದೀರಿ. ಶುಭದಿನ 08. ಗಣಪತಿಗೆ ದೂರ್ವಾರ್ಚನೆ ಮಾಡಿರಿ.




ವಿದ್ಯಾರ್ಥಿಗಳಿಗೆ ಉನ್ನತ ಶಿಕ್ಷಣದಲ್ಲಿ ಪ್ರಗತಿ ಇದೆ. ಕುಟುಂಬ ಸದಸ್ಯರ ಜೊತೆಗೆ ಬಾಂಧವ್ಯ ಗಟ್ಟಿಯಾಗಲಿದೆ. ಲಾಭ ಗಳಿಸಲು ಅತ್ಯುತ್ತಮವಾದ ಸಮಯ ಇದು. ನಿರೀಕ್ಷೆ ಇಟ್ಟು ಹಾಕಿಕೊಂಡ ಯೋಜನೆಗಳನ್ನು ಜಾರಿಗೆ ತರಲಿದ್ದೀರಿ. ಮೇಲಧಿಕಾರಿಗಳ ಜೊತೆಗೆ ಉತ್ತಮ ಸಂಪರ್ಕ ಸಾಧಿಸುತ್ತೀರಿ. ನಿಮ್ಮ ಪ್ರತಿಭೆ ಹಾಗೂ ಶ್ರಮಕ್ಕೆ ಅವರು ಮೆಚ್ಚುಗೆ ಸೂಚಿಸುತ್ತಾರೆ. ಶುಭದಿನ 09. ವಿಷ್ಣು ಸಹಸ್ರನಾಮ ಪಠಿಸಿರಿ.




ಆದಾಯವನ್ನು ಹೆಚ್ಚಳ ಮಾಡಿಕೊಳ್ಳಲು ಮಾಡುವ ಪ್ರಯತ್ನದಿಂದ ಏನೂ ಫಲ ದೊರೆಯುವುದಿಲ್ಲ. ಈ ಹಿಂದೆ ನೀವು ಹಾಕಿದ ಶ್ರಮಕ್ಕೆ ಫಲಿತಾಂಶ ದೊರೆಯಲಿದೆ. ಓದಿನಲ್ಲಿ ನಿಮ್ಮ ಏಕಾಗ್ರತೆ ಹೆಚ್ಚಳವಾಗಲಿದೆ. ವೈಯಕ್ತಿಕ ಬಾಂಧವ್ಯ ಗಟ್ಟಿಯಾಗಲಿದೆ. ಅನಿರೀಕ್ಷಿತ ಖರ್ಚುಗಳಿಂದ ಪಾಠವನ್ನು ಕಲಿಯಲಿದ್ದೀರಿ. ಆಪತ್ತಿಗಾಗಿ ಹಣ ಉಳಿಸಲು ಆಲೋಚನೆ ಮಾಡುತ್ತೀರಿ. ಶುಭದಿನ 11. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.




ಆರೋಗ್ಯದ ಬಗ್ಗೆ ನಿಮ್ಮ ಗಮನ ಹೆಚ್ಚಾಗಲಿದೆ. ನೀವು ಹಾಕಿದ ಶ್ರಮಕ್ಕೆ ಅತ್ಯುತ್ತಮ ಫಲಿತಾಂಶ ದೊರೆಯಲು ಆರಂಭ ಆಗುತ್ತದೆ. ದೈಹಿಕವಾಗಿ ಸದೃಢರಾಗಲಿದ್ದೀರಿ. ಉದ್ಯಮಿಗಳು ಸ್ಥಳೀಯ ಮಾರುಕಟ್ಟೆ ಸಮೀಕ್ಷೆ ಮಾಡಲಿದ್ದೀರಿ. ವೈಯಕ್ತಿಕ ಸಂಬಂಧದಲ್ಲಿ ಸಂಗಾತಿ ಜೊತೆಗೆ ಸಿಟ್ಟಾಗಲಿದ್ದೀರಿ. ಇದರಿಂದ ಮಾನಸಿಕವಾಗಿ ಕಿರಿಕಿರಿಯನ್ನು ಅನುಭವಿಸುತ್ತೀರಿ. ಶುಭದಿನ 13. ಹನುಮಾನ್ ಚಾಲೀಸ್ ಓದಿರಿ.